21	Uttara Karnataka	-	-	5.70	-	-	5.700
22	Bellary	21.29	2.574	14.31	2.270	11.678	52.522
23	Bidar	-	4.25	6.75	-	-	11.000
24	Gulbarga	-	7.28	22.87	-	-	30.350
25	Raichur	6.13	9.00	10.53	3.650	9.780	39.090
26	Koppal	14.00	2.50	15.60	64.750	34.950	150.800
27	Bagalkote	0.42	2.50	11.70	9.000	9.640	52.260
	Total Plus	102.840	316.95	331.82	396.942	382.802	1531.354

Note: 1. Expenditure for strengthening state livestock fatris: Rs. 130.152 lakhs

2. Expenditure for purchase of fodder from Punjab: Rs. 55.56 lakhs

Grand Total of Expenditure: 1717.066 lakhs

463(746) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಬೀದರ್‌ನಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ಪಶುಸಂಗೋಪನೆ ವಿಶ್ವವಿದ್ಯಾನಿಲಯಕ್ಕೆ ಯಾವಾಗ ಮಂಜೂರಾತಿಯನ್ನು ಪಡೆದುಕೊಳ್ಳಲಾಗಿತ್ತು?

ಆ) ಈ ದಿಸೆಯಲ್ಲಿ ಇಲ್ಲಿಯವರೆವಿಗೆ ಯಾವ ಯಾವ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ

ಇ) ಯಾವ ಯಾವ ಜಿಲ್ಲೆಗಳು ಈ ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುತ್ತವೆ

ಈ) ಇದಕ್ಕಾಗಿ ಎಷ್ಟು ಎಕರೆ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ

ಉ) ವಿಶ್ವವಿದ್ಯಾನಿಲಯವನ್ನು ಸ್ಥಾಪಿಸಲು ಅನುಕೂಲವಾಗುವಂತೆ ಸರ್ಕಾರದಿಂದ ಇಲ್ಲಿಯವರೆವಿಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ

ಊ) ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಇದಕ್ಕಾಗಿ ಎಷ್ಟು ಹಣವನ್ನು ನಿಗದಿಪಡಿಸಲಾಗಿದೆ

ಋ) ಈ ವಿಶ್ವವಿದ್ಯಾನಿಲಯದ ಸ್ಥಾಪನೆಯ ಪೂರ್ವದಲ್ಲಿ ಇದರ ಉಸ್ತುವಾರಿಗಾಗಿ ಉನ್ನತ ಅಧಿಕಾರಿಯನ್ನು ನೇಮಿಸಲಾಗಿದೆಯೇ

ೠ) ಹಾಗಿದ್ದಲ್ಲಿ, ಇಲ್ಲಿಯವರೆಗೆ ಅವರು ಮಾಡಿರುವ ಕಾರ್ಯಗಳೇನು ಹಾಗೂ ಈ ವಿಶ್ವವಿದ್ಯಾನಿಲಯವನ್ನು ಪೂರ್ಣಪ್ರಮಾಣದಲ್ಲಿ ಕಾರ್ಯಾರಂಭಗೊಳಿಸಲು ಅಗತ್ಯವಿರುವ ಸಮಯ ಎಷ್ಟು?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು) :

ಅ) ದಿನಾಂಕ 28-02-2004ರಂದು ಸರ್ಕಾರದ ಆದೇಶ ಸಂಖ್ಯೆ: ವಸಂಮೀ:150:ವಅಸೇ: 2004ರ ಪ್ರಕಟಣೆ ಮೂಲಕ ಕರ್ನಾಟಕ ಪಶು ಮತ್ತು ಮೀನುಗಾರಿಕೆ ವಿಶ್ವವಿದ್ಯಾನಿಲಯ ಸ್ಥಾಪನೆಗೊಂಡಿದೆ.

ಆ) 157.27 ಎಕರೆ ವಿಸ್ತೀರ್ಣ ಭೂಮಿಯನ್ನು ವಿಶ್ವವಿದ್ಯಾನಿಲಯಕ್ಕೆ ಗುರುತಿಸಲಾಗಿದೆ. ಕುಲಪತಿಗಳ ನೇಮಕಾತಿ ಪ್ರಕ್ರಿಯೆ ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ. ಕುಲಪತಿಗಳ ನೇಮಕಾತಿಯಾದ ಕೂಡಲೇ ವಿಶ್ವವಿದ್ಯಾನಿಲಯ ಪ್ರಾರಂಭಗೊಳ್ಳಲಿದೆ.

ಇ) ಕರ್ನಾಟಕ ಎಲ್ಲಾ ಜಿಲ್ಲೆಗಳೂ ಈ ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುತ್ತವೆ.

ಈ) 157.27 ಎಕರೆಗಳು

ಉ) ಸಾಂಕೇತಿಕವಾಗಿ ಸಹಾಯಧನವನ್ನು ಕಾಯ್ದಿರಿಸಲಾಗಿದ್ದು ಅದು ಬಿಡುಗಡೆಗೊಂಡಿರುವುದಿಲ್ಲ.

ಊ) ರೂ. 2.00 ಕೋಟಿ ಯೋಜನೆಯಡಿಯಲ್ಲಿ

ಋ) ಡಾ॥ ಎಸ್. ಸುಬ್ರಮಣ್ಯ, ಇವರನ್ನು ವಿಶೇಷ ಕರ್ತವ್ಯಾಧಿಕಾರಿಯನ್ನಾಗಿ ನೇಮಿಸಲಾಗಿದೆ.

ೠ) ಕರ್ನಾಟಕ ಪಶು ವೈದ್ಯ, ಪಶು ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ ಸ್ಥಾಪನೆಯ ಬಗ್ಗೆ ಅಂತಿಮ ವರದಿಯನ್ನು ನೀಡಿರುವರು. ಕರ್ನಾಟಕ ಪಶು ವೈದ್ಯ, ಪಶು ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ ಅಧಿನಿಯಮವು ದಿನಾಂಕ 28–02–2004ರಿಂದ ಜಾರಿಗೆ ಬಂದಿರುತ್ತದೆ.

ಕುಲಪತಿಯ ನೇಮಕಾತಿಯು ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ. ಕುಲಪತಿಗಳ ನೇಮಕಾತಿ ನಂತರ ವಿಶ್ವವಿದ್ಯಾನಿಲಯವು ಪೂರ್ಣ ಪ್ರಮಾಣದ ಕಾರ್ಯನಿರ್ವಹಿಸುವುದು.

464(449) ಶ್ರೀ ಹೊನ್ನಾಳಿ ಜಬ್ಬಾರ್ ಖಾನ್ ಹಯಾತ್ ಖಾನ್ (ಹುಬ್ಬಳ್ಳಿ) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಹುಬ್ಬಳ್ಳಿ ಬಸವೇಶ್ವರ ಮಾರುಕಟ್ಟೆಯ (ಎಪಿಎಂಸಿ) ವರ್ತಕರು ಆರ್ಥಿಕ ತೊಂದರೆ ಅನುಭವಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಎ.ಪಿ.ಎಂ.ಸಿ. ಅಮರಗೋಳ ಹುಬ್ಬಳ್ಳಿಯಲ್ಲಿನ ವರ್ತಕರಿಗೆ ಯಾವ ಯಾವ ತರಹದ ಆರ್ಥಿಕ ನೆರವು ನೀಡಲು ಸರ್ಕಾರ ಯೋಜಿಸಿದೆ

ಇ) ವರ್ತಕರ ತೊಂದರೆ ಹೋಗಲಾಡಿಸಲು ಸರ್ಕಾರ ಕೈಗೊಂಡ ಕ್ರಮವೇನು

ಶ್ರೀ ಪ್ರಕಾಶ್ ಬಿ. ಹುಕ್ಕೇರಿ (ಕೃಷಿ ಮಾರುಕಟ್ಟೆ ಸಚಿವರು) :

ಅ) ಇಲ್ಲ

ಆ) ಪ್ರಶ್ನೆ ಉದ್ಭವಿಸುವುದಿಲ್ಲ

ಇ) ಪ್ರಶ್ನೆ ಉದ್ಭವಿಸುವುದಿಲ್ಲ

467(554) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಸಿ.ಇ.ಟಿ. ಸೀಟು ಹಂಚಿಕೆ ಮತ್ತು ಫೀ ನಿಗದಿ ಬಗ್ಗೆ ಸರ್ಕಾರ ಮತ್ತು ಆಡಳಿತ ಮಂಡಳಿಗಳ ನಡುವೆ ಯಾವುದೇ ಒಂದು ನಿರ್ದಿಷ್ಟ ನೀತಿ ನಿರೂಪಣೆ ಆಗದೆ ಇರುವುದರಿಂದ ರಾಜ್ಯದ ವಿದ್ಯಾರ್ಥಿಗಳು ಮತ್ತು ಪಾಲಕರ ಗೊಂದಲದಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಬಂದಿದ್ದಲ್ಲಿ ಈ ಗೊಂದಲ ನಿವಾರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಸಿ.ಇ.ಟಿ. ಬಗ್ಗೆ ಸುಪ್ರೀಂ ಕೋರ್ಟ್ ನೀಡಿರುವ ತೀರ್ಮಗಳ ರೀತಿಯಲ್ಲಿ ಅನುಷ್ಠಾನ ಮಾಡುವಲ್ಲಿ ಸರ್ಕಾರಕ್ಕೆ ಇರುವ ತೊಂದರೆಗಳೇನು

ಈ) ಇದ್ದಲ್ಲಿ, ಸುಪ್ರೀಂ ಕೋರ್ಟ್‌ನಲ್ಲಿ ತೀರ್ಪಿನ ಕುರಿತು ಪುನಃ ಪರಿಶೀಲನಾ ಅರ್ಜಿ ಸಲ್ಲಿಸಲಾಗಿದೆಯೆ?

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) :

ಅ) ಬಂದಿದೆ